Fax: 08282-256262
E-mail:kuvempuacademic@gmail.com

Phone No - 08282-256149
Website:www.kuvempu.ac.in

# ಕುವೆಂಪು ವಿಶ್ವವಿದ್ಯಾಲಯ

ವಿಶ್ವವಿದ್ಯಾಲಯ ಕಾರ್ಯಾಲಯ, ಶೈಕ್ಷಣಿಕ ವಿಭಾಗ, ಕುವೆಂಪು ಶತಮಾನೋತ್ಸವ ಭವನ,
ಜ್ಞಾನಸಹ್ಯಾದ್ರಿ, ಶಂಕರಘಟ್ಟ – 577 451, ಶಿವಮೊಗ್ಗ ಜಿಲ್ಲೆ.

Re-Accredited by NAAC with "A" Grade, Ranked 73rd place in NIRF-2019 & 45th Place at National Level in SCIMAGO Rankings

ಸಂಖ್ಯೆ:ಕುವಿ:ಶೈವಿ:ಎಸಿ-5: 1398 :2023-24

ದಿನಾಂಕ:06-07-2023

## ಸುತ್ತೋಲೆ

**ವಿಷಯ: ಭಾರತ್ ಇನ್ಸ್ಟಿಟ್ಯೂಟ್ ಆಫ್ ಸ್ಕೂಲಿಂಗ್ ಎಜುಕೇಷನ್(ರಿ), ಬೆಂಗಳೂರು – ಇವರಿಂದ ನಡೆಸಲಾಗುತ್ತಿರುವ ಮುಕ್ತ ಶಾಲೆಯಲ್ಲಿನ 10+2 ತರಗತಿಯಲ್ಲಿ ಉತ್ತೀರ್ಣಗೊಂಡ ವಿದ್ಯಾರ್ಥಿಗಳಿಗೆ ಕುವೆಂಪು ವಿಶ್ವವಿದ್ಯಾಲಯದ ಅಧೀನದಲ್ಲಿ ಬರುವ ಎಲ್ಲಾ ಪದವಿ ಕಾಲೇಜುಗಳಲ್ಲಿ ಪ್ರವೇಶ ಪಡೆಯಲು ಅನುಮತಿ (ಅರ್ಹತೆ-Eligibility) ನೀಡುವ ಕುರಿತು.**

ಉಲ್ಲೇಖ:
1. ವ್ಯವಸ್ಥಾಪಕ ನಿರ್ದೇಶಕರು, ಭಾರತ್ ಇನ್ಸ್ಟಿಟ್ಯೂಟ್ ಆಫ್ ಸ್ಕೂಲಿಂಗ್ ಎಜುಕೇಷನ್(ರಿ), ಬೆಂಗಳೂರು – ಇವರ ಪತ್ರ ದಿನಾಂಕ:27-01-2022.
2. ಸರ್ಕಾರದ ಪತ್ರ ಸಂಖ್ಯೆ ಇಡಿ 248 ಯುಆರ್‌ಸಿ 2021, ದಿನಾಂಕ:25-11-2021.
3. ವಿಶ್ವವಿದ್ಯಾಲಯದ ಸುತ್ತೋಲೆ ಸಂಖ್ಯೆ:ಕುವಿ:ಶೈವಿ:ಎಸಿ-5:5740:2021-22, ದಿ:10-03-2022.
4. ಸರ್ಕಾರದ ಪತ್ರ ಸಂಖ್ಯೆ ಇಡಿ 248 ಯುಆರ್‌ಸಿ 2021, ದಿನಾಂಕ:12-09-2022.
5. ವಿಶ್ವವಿದ್ಯಾಲಯದ ಸುತ್ತೋಲೆ ಸಂಖ್ಯೆ:ಕುವಿ:ಶೈವಿ:ಎಸಿ-5:2908:2022-23, ದಿ:15-10-2022.
6. ವ್ಯವಸ್ಥಾಪಕ ನಿರ್ದೇಶಕರು, ಭಾರತ್ ಇನ್ಸ್ಟಿಟ್ಯೂಟ್ ಆಫ್ ಸ್ಕೂಲಿಂಗ್ ಎಜುಕೇಷನ್(ರಿ), ಬೆಂಗಳೂರು – ಇವರ ಪತ್ರ ದಿನಾಂಕ:14-06-2023.
7. ಸರ್ಕಾರದ ಪತ್ರ ಸಂಖ್ಯೆ ಇಡಿ 248 ಯುಆರ್‌ಸಿ 2021, ದಿನಾಂಕ:28-11-2022.
8. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:04-07-2023.

*****

ವ್ಯವಸ್ಥಾಪಕ ನಿರ್ದೇಶಕರು, ಭಾರತ್ ಇನ್ಸ್ಟಿಟ್ಯೂಟ್ ಆಫ್ ಸ್ಕೂಲಿಂಗ್ ಎಜುಕೇಷನ್(ರಿ), ಬೆಂಗಳೂರು – ಇವರ ಉಲ್ಲೇಖಿತ (1)ರ ಮನವಿಯ ಮೇರೆಗೆ ಸದರಿ ಸಂಸ್ಥೆಯಲ್ಲಿ ಮುಕ್ತ ಶಾಲೆಯಲ್ಲಿನ 10+2 ವ್ಯಾಸಂಗ ಮಾಡಿದ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣ ಇಲಾಖೆ ವ್ಯಾಪ್ತಿಯಲ್ಲಿನ ವಿಶ್ವವಿದ್ಯಾಲಯಗಳ ಅಧೀನದಲ್ಲಿ ಬರುವ ಎಲ್ಲಾ ಪದವಿ ಕಾಲೇಜುಗಳಲ್ಲಿ ಪ್ರವೇಶಾತಿಯನ್ನು ಪಡೆಯಲು ಅನುಮತಿ (ಅರ್ಹತೆ-Eligibility) ನೀಡುವಂತೆ ಸರ್ಕಾರವನ್ನು ಕೋರಿದ್ದರು. ಉಲ್ಲೇಖಿತ (2)ರ ಸರ್ಕಾರದ ಪತ್ರದಲ್ಲಿ ಸದರಿ ಸಂಸ್ಥೆಯ ಮನವಿಯನ್ನು ಮಾನ್ಯ ಮಾಡಿ, ಮುಕ್ತ ಶಾಲೆಯಲ್ಲಿನ 10+2 ವ್ಯಾಸಂಗ ಮಾಡಿದ ವಿದ್ಯಾರ್ಥಿಗಳಿಗೆ ವಿಶ್ವವಿದ್ಯಾಲಯಗಳ ಅಧೀನದಲ್ಲಿ ಬರುವ ಎಲ್ಲಾ ಪದವಿ ಕಾಲೇಜುಗಳಲ್ಲಿ ಪ್ರವೇಶಾತಿ ಪಡೆಯಲು ಅನುಮತಿ (ಅರ್ಹತೆ-Eligibility) ನೀಡಲಾಗಿತ್ತು. ಅದರಂತೆ ಕುವೆಂಪು ವಿಶ್ವವಿದ್ಯಾಲಯದಲ್ಲಿಯೂ ಉಲ್ಲೇಖಿತ (3)ರಲ್ಲಿ ಸದರಿ ಸಂಸ್ಥೆಯಲ್ಲಿ ಮುಕ್ತ ಶಾಲೆಯಲ್ಲಿನ 10+2 ವ್ಯಾಸಂಗ ಮಾಡಿದ ವಿದ್ಯಾರ್ಥಿಗಳಿಗೆ ಪದವಿ ಕೋರ್ಸ್‌ಗಳಿಗೆ ಪ್ರವೇಶಾತಿಗೆ ಅನುಮತಿ ನೀಡಲಾಗಿತ್ತು. ಆದರೆ ಉಲ್ಲೇಖಿತ (4)ರ ಸರ್ಕಾರದ ಪತ್ರದಲ್ಲಿ ಸದರಿ ಸಂಸ್ಥೆಗೆ ನೀಡಿದ್ದ ಮಾನ್ಯತೆಯನ್ನು ರದ್ದುಪಡಿಸಿ, ಸರ್ಕಾರವು ಹೊರಡಿಸಿದ್ದ ಆದೇಶವನ್ನು ಪ್ರಶ್ನಿಸಿ, ಸಂಸ್ಥೆಯು ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ದಾಖಲಿಸಿದ್ದು, ಅದರಿಂದಾಗಿ ನ್ಯಾಯಾಲಯದ ಅಂತಿಮ ತೀರ್ಪಿನವರೆಗೆ ಯಾವುದೇ ಪ್ರವೇಶಾತಿಯನ್ನು ಮಾಡದಂತೆ, ಒಂದು ವೇಳೆ ಈಗಾಗಲೇ ಪ್ರವೇಶಾತಿ ನೀಡಿದ್ದಲ್ಲಿ ಮುಂದಿನ ನಿರ್ದೇಶನದವರೆಗೆ ತಡೆಹಿಡಿಯುವಂತೆ ತಿಳಿಸಲಾಗಿತ್ತು. ಸರ್ಕಾರದ ಪತ್ರದನ್ವಯ ಉಲ್ಲೇಖಿತ (5)ರಲ್ಲಿ ವಿಶ್ವವಿದ್ಯಾಲಯವು ಸುತ್ತೋಲೆಯನ್ನು ಹೊರಡಿಸಿರುತ್ತದೆ.

ಪ್ರಸ್ತುತ ಉಲ್ಲೇಖಿತ (6)ರಲ್ಲಿ ಸದರಿ ಸಂಸ್ಥೆಯವರು ನೀಡಿರುವ ಮನವಿಯಲ್ಲಿ ಉಲ್ಲೇಖಿತ (7)ರ ಸರ್ಕಾರದ ಆದೇಶದಲ್ಲಿ ತಿಳಿಸಿರುವ ಉಚ್ಚ ನ್ಯಾಯಾಲಯದ ಮಧ್ಯಂತರ ಆದೇಶದಂತೆ ಮತ್ತು ರಿಟ್ ಸಂಖ್ಯೆ 18552/2022, 21767/2022ರ ಪ್ರಕರಣಗಳಲ್ಲಿ ಉಚ್ಚ ನ್ಯಾಯಾಲಯವು ನೀಡುವ ಅಂತಿಮ ತೀರ್ಪಿಗೊಳಪಟ್ಟು, ಪ್ರವೇಶಾತಿಗೆ ಅನುಮತಿ ನೀಡುವಂತೆ ಕೋರಿರುತ್ತಾರೆ. ಇದನ್ನು ಪರಿಗಣಿಸಿ ಉಲ್ಲೇಖಿತ (8)ರಲ್ಲಿ ಮಾನ್ಯ ಕುಲಪತಿಗಳ ಅನುಮೋದನೆ ಮೇರೆಗೆ, ಕೆಳಕಂಡ ಷರತ್ತಿಗೊಳಪಟ್ಟು ಕುವೆಂಪು ವಿಶ್ವವಿದ್ಯಾಲಯ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಪದವಿ ಕಾಲೇಜುಗಳಲ್ಲಿ **ಭಾರತ್ ಇನ್ಸ್ಟಿಟ್ಯೂಟ್ ಆಫ್ ಸ್ಕೂಲಿಂಗ್ ಎಜುಕೇಷನ್(ರಿ), ಬೆಂಗಳೂರು** – ಈ ಸಂಸ್ಥೆಯಲ್ಲಿ ಮುಕ್ತ ಶಾಲೆಯಲ್ಲಿನ 10+2 ವ್ಯಾಸಂಗ ಮಾಡಿದ ವಿದ್ಯಾರ್ಥಿಗಳಿಗೆ ಪ್ರವೇಶಾತಿಗೆ ಅನುಮತಿ ನೀಡಲಾಗಿದೆ.

--2

1. ರಾಷ್ಟ್ರೀಯ ಮುಕ್ತ ವಿಶ್ವವಿದ್ಯಾಲಯ, ನವದೆಹಲಿ ಇವರು ವಿಧಿಸಿರುವ ಎಲ್ಲಾ ಷರತ್ತು / ನಿಬಂಧನೆಗಳನ್ನು ಕಡ್ಡಾಯವಾಗಿ ಪೂರೈಸತಕ್ಕದ್ದು.
2. ಶಿಕ್ಷಣ ಕಾಯ್ದೆಯಡಿಯಲ್ಲಿ ನಿಗದಿಪಡಿಸಿರುವ ಎಲ್ಲಾ ಷರತ್ತು / ನಿಬಂಧನೆಗಳನ್ನು ಪಾಲಿಸತಕ್ಕದ್ದು.
3. ಸರ್ಕಾರವು ಕಾಲಕಾಲಕ್ಕೆ ಹೊರಡಿಸಿರುವ ಆದೇಶಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು ಹಾಗೂ ಯಾವುದೇ ಆದೇಶವನ್ನು ಉಲ್ಲಂಘಿಸಿದಲ್ಲಿ ನೀಡಲಾದ ಅನುಮತಿಯನ್ನು ರದ್ದುಗೊಳಿಸಲಾಗುವುದು.

ಕುಲಸಚಿವರಿಂದ ಅನುಮೋದಿಸಲ್ಪಟ್ಟಿದೆ

ಉಪಕುಲಸಚಿವ
ಕುವೆಂಪು ವಿಶ್ವವಿದ್ಯಾನಿಲಯ
ಜ್ಞಾನ ಸಹ್ಯಾದ್ರಿ
ಶಂಕರಘಟ್ಟ-577 451
ಶಿವಮೊಗ್ಗ ಜಿಲ್ಲೆ

ಗೆ,

1. ವ್ಯವಸ್ಥಾಪಕ ನಿರ್ದೇಶಕರು, ಭಾರತ್ ಇನ್ಸ್ಟಿಟ್ಯೂಟ್ ಆಫ್ ಸ್ಕೂಲಿಂಗ್ ಎಜುಕೇಷನ್(ರಿ), BISE, #52/2, Maruti Farm, Dombarahalli, Lakshmipura Post, Dasanapura Hobli, ಬೆಂಗಳೂರು – 562162.
2. ಕುವೆಂಪು ವಿಶ್ವವಿದ್ಯಾಲಯದ ವ್ಯಾಪ್ತಿಗೊಳಪಡುವ ಶಿವಮೊಗ್ಗ / ಚಿಕ್ಕಮಗಳೂರು ಜಿಲ್ಲೆಯ ಎಲ್ಲಾ ಸ್ನಾತಕ ಪದವಿಗಳ ಸಂಯೋಜಿತ/ ನೇರ ಆಡಳಿತ / ಘಟಕ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.

ಪ್ರತಿಗಳು

1. ಆಪ್ತ ಸಹಾಯಕರು, ಕುಲಪತಿಗಳು: ಕುಲಸಚಿವರು: ಕುಲಸಚಿವರು(ಪರೀಕ್ಷಾಂಗ); ಹಣಕಾಸು ಅಧಿಕಾರಿಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
2. ಕಛೇರಿ ಪ್ರತಿ.